ಬೇಕಾಗುವ ಕೆಲವು ಉಪಕರಣಗಳನ್ನು ಮಾಲಿನ್ಯ ನಿಯಂತ್ರಣ ಮಂಡಳಿ ಸಾರಿಗೆ ಇಲಾಖೆಗೆ ಒದಗಿಸಿದೆ. ಇತ್ತೀಚೆಗೆ ಬೆಂಗಳೂರು ಮತ್ತಿತರ ಪ್ರಮುಖ ನಗರಗಳಲ್ಲಿ ವಾಹನಗಳನ್ನು ಪರೀಕ್ಷಿಸುವ ಸಪ್ತಾಹವನ್ನು ಆಚರಿಸಲಾಗುತ್ತಿದೆ. ಮುಂದೆ ಮಾಲಿನ್ಯಕಾರಕ ಹೊಗೆ ಉಗುಳುವ ವಾಹನಗಳ ಮಾಲೀಕರ ಮೇಲೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳಲು ಸಾರಿಗೆ ಇಲಾಖೆಗೆ ಸೂಚಿಸಲಾಗಿದೆ.

ಆ) ಹಾಲಿ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಸೇವಿಸಿ ಉಗುಳುವುದರ ವಿರುದ್ಧ ಕ್ರಮ ಜರುಗಿಸುವ ಹೊಣೆ ಸಂಬಂಧಪಟ್ಟ ಮುನಿಸಿಪಾಲಿಟಿ ಹಾಗೂ ನಗರಪಾಲಿಕೆಯವರದಾಗಿರುತ್ತದೆ. ಆದರೆ ದೆಹಲಿ ಮತ್ತು ಮುಂಬೈ ಮಹಾನಗರಗಳಲ್ಲಿ ಕಾನೂನು ಕ್ರಮ ತರಲಾಗಿರುವುದರಿಂದ ಅಲ್ಲಿನ ವ್ಯವಸ್ಥೆಯನ್ನು ಅಭ್ಯಸಿಸಲಾಗುವುದು.

ಪ್ರೌಢಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಅರೆಕಾಲಿಕ ಶಿಕ್ಷಕರನ್ನು ಖಾಯಂ ಗೊಳಿಸುವುದು

765 - ಶ್ರೀ ಹೆಚ್. ಎಸ್. ಶಂಕರಲಿಂಗೇಗೌಡ (ಚಾಮರಾಜ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಪ್ರೌಢಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಅರೆಕಾಲಿಕ ಶಿಕ್ಷಕರ ಸಂಖ್ಯೆ ಎಷ್ಟು?

ಆ) ಇವರುಗಳಲ್ಲಿ ಖಾಯಂ ಆಗಿರುವವರು ಹಾಗೂ ಖಾಯಂ ಆಗದೇ ಇರುವವರ ಸಂಖ್ಯೆ ಎಷ್ಟು?

ಇ) ಇವರುಗಳನ್ನು ಖಾಯಂ ಮಾಡುವ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಹೆಚ್. ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) 640

ಆ) ಇವರುಗಳಲ್ಲಿ ಯಾರನ್ನು ಖಾಯಂ ಮಾಡಿರುವುದಿಲ್ಲ.

ಇ) ಈ ವಿಚಾರದ ಬಗ್ಗೆ ಸರ್ಕಾರ ಪರಿಶೀಲಿಸುತ್ತಿದೆ.

ತಿಪಟೂರು ತಾಲ್ಲೂಕಿಗೆ ಡಿಪಿಎಪಿ ಯೋಜನೆಯಡಿಯಲ್ಲಿ ಬಿಡುಗಡೆಯಾದ ಹಣ

767 - ಶ್ರೀ ಬಿ. ನಂಜಾಮರಿ (ತಿಪಟೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಡಿಪಿಎಪಿ ಯೋಜನೆ ಅಡಿಯಲ್ಲಿ 1996-97ನೇ ಸಾಲಿಗೆ ತಿಪಟೂರು ತಾಲ್ಲೂಕಿಗೆ ಹಣ ಬಿಡುಗಡೆಯಾಗದೇ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಬಿಡುಗಡೆ ಮಾಡದೇ ಇರಲು ಕಾರಣವೇನು? ಯಾವಾಗ ಬಿಡುಗಡೆ ಮಾಡುವಿರಿ?